ಕರ್ನಾಟಕ ಸರ್ಕಾರ

ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: ಡಿಟಿಇ/357/ಇಎಸ್‌ಟಿ(7)/2019-20

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ,
ಅರಮನೆ ರಸ್ತೆ, ಬೆಂಗಳೂರು-01,
ದಿನಾಂಕ: 23.04.2020.

## ಸುತ್ತೋಲೆ

ವಿಷಯ: ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದ ಅಧಿಕಾರಿ / ಸಿಬ್ಬಂದಿಗಳು ಕರ್ತವ್ಯಕ್ಕೆ ಹಾಜರಾಗುವ ಬಗ್ಗೆ.

ಉಲ್ಲೇಖ: 1. ಈ ಕಛೇರಿ ಸಮಾಂಕಿತ ಸುತ್ತೋಲೆ ದಿನಾಂಕ: 22.04.2020
2. ಸರ್ಕಾರದ ಆದೇಶ ಸಂಖ್ಯೆ: ಆರ್‌ಡಿ 158 ಟಿಎನ್‌ಆರ್ 2020 ದಿ: 22.04.2020

*-*-*

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ(1)ರ ಸುತ್ತೋಲೆಯನ್ನು ಹಿಂಪಡೆಯಲಾಗಿದೆ. ಉಲ್ಲೇಖ(2) ರ ಸರ್ಕಾರದ ಆದೇಶದ ಕಂಡಿಕೆ 19 (2) ರಲ್ಲಿ ನೀಡಿರುವ ಸೂಚನೆಯಂತೆ ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿರುವ ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ ಹಾಗೂ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ / ಅನುದಾನಿತ ಸಂಸ್ಥೆಗಳಲ್ಲಿನ ಅಧಿಕಾರಿ / ಸಿಬ್ಬಂದಿಗಳ ಅಗತ್ಯವಿದ್ದಲ್ಲಿ ಕರ್ತವ್ಯಕ್ಕೆ ಹಾಜರಾಗಲು ಸೂಚಿಸಿದೆ. ಅಧಿಕಾರಿ / ಸಿಬ್ಬಂದಿಗಳು ಈ ಕೆಳಕಂಡಂತೆ ಸೂಚನೆಗಳನ್ನು ತಪ್ಪದೇ ಪಾಲಿಸತಕ್ಕದ್ದು ಮತ್ತು ಸದರಿ ಸುತ್ತೋಲೆಯು ಸರ್ಕಾರದ ಮುಂದಿನ ಆದೇಶದವರೆಗೆ ಜಾರಿಯಲ್ಲಿರುತ್ತದೆ.

19 (ii) All other Departments of State Government to work as per the orders issued by Department of Personnel and Administration (DP&AR). However, delivery of Public Services shall be ensured, and necessary staff will be deployed for such purpose.

1. ಅಧಿಕಾರಿ / ಸಿಬ್ಬಂದಿಗಳು ಸರ್ಕಾರವು ಕಂಟೇನ್ಮೆಂಟ್ ವಲಯವೆಂದು ಘೋಷಿಸಿರುವ ಪ್ರದೇಶದಲ್ಲಿ ವಾಸವಿದ್ದಲ್ಲಿ ಕರ್ತವ್ಯಕ್ಕೆ ಹಾಜರಾಗಲು ಸರ್ಕಾರದ ಮುಂದಿನ ಆದೇಶದವರೆಗೆ ವಿನಾಯಿತಿ ನೀಡಿದೆ
2. ಇಲಾಖೆಯ ಅಧೀನದಲ್ಲಿನ ಅಧಿಕಾರಿ / ಸಿಬ್ಬಂದಿ ವರ್ಗದವರು ಕೆಲಸಕ್ಕೆ ಹಾಜರಾಗುವ ಸಮಯದಲ್ಲಿ ಇಲಾಖೆಯು ನೀಡಿರುವ ತಮ್ಮ ಗುರುತಿನ ಚೀಟಿಯನ್ನು ಕಡ್ಡಾಯವಾಗಿ ಇಟ್ಟುಕೊಳ್ಳತಕ್ಕದ್ದು.
3. ಕಛೇರಿಗೆ ಪ್ರವೇಶಿಸುವ ಮುನ್ನ ಕಛೇರಿ ದ್ವಾರದಲ್ಲಿ ಥರ್ಮಲ್ ಸ್ಕ್ಯಾನಿಂಗ್‌ಗೆ ಕಡ್ಡಾಯವಾಗಿ ಒಳಪಡುವುದು ಮತ್ತು ಸ್ಯಾನಿಟೈಸರ್‌ನಿಂದ ಕೈಗಳನ್ನು ಸ್ವಚ್ಚಗೊಳಿಸತಕ್ಕದ್ದು.
4. ದ್ವಿಚಕ್ರ ವಾಹನದಲ್ಲಿ ಕೆಲಸಕ್ಕೆ ಹಾಜರಾಗುವ ಸಿಬ್ಬಂದಿಗಳು ಒಬ್ಬರೇ ಪ್ರಯಾಣಿಸುವುದು ಮತ್ತು ಕಾರಿನಲ್ಲಿ ಕೆಲಸಕ್ಕೆ ಹಾಜರಾಗುವ ಸಿಬ್ಬಂದಿಗಳು ಅಂತರವನ್ನು ಕಾಯ್ದುಕೊಂಡು ಇಬ್ಬರು ಮಾತ್ರ ಪ್ರಯಾಣಿಸುವುದು.
5. ಎಲ್ಲಾ ಅಧಿಕಾರಿ / ಸಿಬ್ಬಂದಿ ವರ್ಗದವರು ವೈಯಕ್ತಿಕ ಆರೋಗ್ಯದ ಕಡೆಗೆ ಗಮನಕೊಡತಕ್ಕದ್ದು, ಉಸಿರಾಟ ತೊಂದರೆ, ಕೆಮ್ಮು, ಜ್ವರ ಮತ್ತು ಶೀತ ಇರುವುದು ಕಂಡುಬಂದಲ್ಲಿ ಅಗತ್ಯ ಚಿಕಿತ್ಸೆಗೆ ಒಳಪಡತಕ್ಕದ್ದು ಹಾಗೂ ಸಕ್ಷಮ ಪ್ರಾಧಿಕಾರದ ಗಮನಕ್ಕೆ ತರತಕ್ಕದ್ದು ಮತ್ತು ಇತರ ಅಧಿಕಾರಿ / ಸಿಬ್ಬಂದಿ ವರ್ಗದವರು ಅವರಿಂದ ದೂರವಿದ್ದು, ಸಾಮಾಜಿಕ ಅಂತರವನ್ನು ಕಾಯ್ದುಕೊಳ್ಳತಕ್ಕದ್ದು.
6. ಕಛೇರಿ ಕೆಲಸದ ಸಮಯದಲ್ಲಿ ಸಾಮಾಜಿಕ ಅಂತರವನ್ನು ಕಡ್ಡಾಯವಾಗಿ ಪಾಲಿಸುವುದು, ವೈಯಕ್ತಿಕ ಸ್ವಚತೆಯನ್ನು ಕಾಪಾಡಿಕೊಳ್ಳುವುದು ಹಾಗೂ ಕಡ್ಡಾಯವಾಗಿ ಮುಖಕ್ಕೆ ಮಾಸ್ಕ್ ಧರಿಸುವುದು.
7. ಆಗಾಗ ಸ್ಯಾನಿಟೈಸರ್ ಅಥವಾ ಡಿಟರ್ಜೆಂಟ್ ಬಳಸಿ ಕೈಗಳನ್ನು ತೊಳೆಯುವುದು. ತೊಳಯದಿರುವ ಕೈಗಳಿಂದ ಕಣ್ಣು, ಕಿವಿ ಮೂಗು ಮತ್ತು ಬಾಯಿಯನ್ನು ಮುಟ್ಟಿಕೊಳ್ಳುವುದು ಮತ್ತು ಉಜ್ಜುವುದನ್ನು ಮಾಡಬಾರದು.

8. ಕಛೇರಿ ಸಭೆಗಳಲ್ಲಿ ಸಾಮಾಜಿಕ ಅಂತರವನ್ನು ಕಡ್ಡಾಯವಾಗಿ ಪಾಲಿಸುವುದು. ಲಿಫ್ಟ್‌ಗಳನ್ನು ಬಳಸದೇ ಆದಷ್ಟು ಮೆಟ್ಟಿಲುಗಳನ್ನು ಉಪಯೋಗಿಸುವುದು.
9. ಬಿಸಿ ನೀರನ್ನು ಕುಡಿಯಲು ಉಪಯೋಗಿಸುವುದು.
10. ಅನಗತ್ಯವಾಗಿ ಪ್ರಯಾಣಿಸಬಾರದು ಅದರಲ್ಲೂ ಕೋವಿಡ್–19 ಸೋಂಕು ಬಾಧಿತ ಪ್ರದೇಶಗಳಿಗೆ ಪ್ರಯಾಣಿಸಬಾರದು.

**ಮುಂದುವರೆದು ತಾಂತ್ರಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ / ಅನುದಾನಿತ ಸಂಸ್ಥೆಗಳಿಗೆ ಸಂಬಂಧಿಸಿದಂತೆ ಸೂಚನೆಗಳು:**

1. ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಬರುವ ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದ ಸಂಸ್ಥೆಗಳಲ್ಲಿ ಕರ್ತವ್ಯಕ್ಕೆ ಹಾಜರಾಗುವ ಬಗ್ಗೆ ಆಯಾ ಜಿಲ್ಲೆಗಳಿಗೆ ಸಂಬಂಧಪಟ್ಟ ಜಿಲ್ಲಾಧಿಕಾರಿಗಳಿಂದ ಅನುಮತಿ ಪಡೆದು ಸದರಿಯವರ ನಿರ್ದೇಶನದಂತೆ ಕರ್ತವ್ಯಕ್ಕೆ ಹಾಜರಾಗತಕ್ಕದ್ದು. (ಸಂಸ್ಥೆಗಳಲ್ಲಿ ಅಗತ್ಯ ಕರ್ತವ್ಯವಿದ್ದಲ್ಲಿ, ಪ್ರಾಂಶುಪಾಲರು ಸೂಚಿಸಿದ್ದಲ್ಲಿ ಮಾತ್ರ ಅಂತಹ ಅಧಿಕಾರಿ / ಸಿಬ್ಬಂದಿಗಳು ಸಂಸ್ಥೆಗೆ ಹಾಜರಾಗತಕ್ಕದ್ದು);
2. ಇಲಾಖೆಯ ಅಧೀನದಲ್ಲಿನ ಎಲ್ಲಾ ಸರ್ಕಾರಿ / ಅನುದಾನಿತ ಪಾಲಿಟೆಕ್ನಿಕ್‌ಗಳಲ್ಲಿನ ಪ್ರಾಂಶುಪಾಲರು ಝೂಮ್ ಅಪ್ಲಿಕೇಷನ್‌ನ್ನು (ZOOM APPLICATION) ಬಳಸದೇ ಆನ್‌ಲೈನ್ ಪ್ಲಾಟ್‌ಪಾರ್ಮ್ (ONLINE FLATFORM) ಮೂಲಕ ಪಠ್ಯಕ್ರಮ ಪರಿಷ್ಕರಣೆ ಕಾರ್ಯವನ್ನು ನಡೆಸತಕ್ಕದ್ದು ಮತ್ತು ಕೇಂದ್ರ ಮಾನವ ಸಂಪನ್ಮೂಲ ಅಭಿವೃದ್ಧಿ ಮಂತ್ರಾಲಯ ಹಾಗೂ ಎಐಸಿಟಿಇ ನೀಡಿದ ಮಾರ್ಗದರ್ಶನದಂತೆ ಇತರೆ ಆನ್‌ಲೈನ್ ಪ್ಲಾಟ್‌ಪಾರ್ಮ್ (ONLINE FLATFORM) ಮೂಲಕ ತಮ್ಮ ವಿದ್ಯಾರ್ಥಿಗಳಿಗೆ ಪಠ್ಯಕ್ರಮಗಳ ಪುನಾರಾವರ್ತಿತ ತರಗತಿಗಳನ್ನು ಪ್ರಾರಂಭಿಸಲು ಕ್ರಮ ತೆಗೆದುಕೊಳ್ಳತಕ್ಕದ್ದು.
3. ಇಲಾಖೆಯ ಅಧೀನದಲ್ಲಿನ ಎಲ್ಲಾ ಸರ್ಕಾರಿ / ಅನುದಾನಿತ ಇಂಜಿನಿಯರಿಂಗ್ ಪ್ರಾಂಶುಪಾಲರು ಝೂಮ್ ಅಪ್ಲಿಕೇಷನ್‌ನ್ನು (ZOOM APPLICATION)ಬಳಸದೇ ಕೇಂದ್ರ ಮಾನವ ಸಂಪನ್ಮೂಲ ಅಭಿವೃದ್ಧಿ ಮಂತ್ರಾಲಯ ಹಾಗೂ ಎಐಸಿಟಿಇ ನೀಡಿದ ಮಾರ್ಗದರ್ಶನದಂತೆ ಇತರೆ ಆನ್‌ಲೈನ್ ಪ್ಲಾಟ್‌ಪಾರ್ಮ್ (ONLINE FLATFORM) ಮೂಲಕ ತಮ್ಮ ವಿದ್ಯಾರ್ಥಿಗಳಿಗೆ ವಿಶ್ವೇಶ್ವರಯ್ಯ ತಾಂತ್ರಿಕ ಮಹಾವಿದ್ಯಾಲಯದ ಸೂಚನೆಯನ್ವಯ ಪಠ್ಯಕ್ರಮಗಳನ್ನು ವಿದ್ಯಾರ್ಥಿಗಳಿಗೆ ಆನ್‌ಲೈನ್ ಮೂಲಕ ತರಗತಿಗಳನ್ನು ತೆಗೆದುಕೊಂಡು ಪೂರ್ಣಗೊಳಿಸತಕ್ಕದು.

**ನಿರ್ದೇಶಕರು,**
**ತಾಂತ್ರಿಕ ಶಿಕ್ಷಣ ಇಲಾಖೆ.**

ಇವರಿಗೆ:–

1. ತಾಂತ್ರಿಕ ಶಿಕ್ಷಣ ನಿರ್ದೇಶನಾಲಯದಲ್ಲಿನ ಎಲ್ಲಾ ಅಧಿಕಾರಿ / ಸಿಬ್ಬಂದಿ ವರ್ಗದವರಿಗೆ (ಇಲಾಖೆಯಲ್ಲಿ ಅಗತ್ಯ ಕರ್ತವ್ಯವಿದ್ದಲ್ಲಿ ಇಲಾಖಾ ಮುಖ್ಯಸ್ಥರು ಸೂಚಿಸಿದ್ದಲ್ಲಿ ಅಂತಹ ಅಧಿಕಾರಿ / ಸಿಬ್ಬಂದಿಗಳು ಕಛೇರಿಗೆ ಹಾಜರಾಗಲು ಸೂಚಿಸಿದೆ);
2. ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿನ ಎಲ್ಲಾ ಸಂಸ್ಥೆಗಳ ಪ್ರಾಂಶುಪಾಲರುಗಳಿಗೆ;
3. ಇ–ಆಡಳಿತ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು(**ಅಂತರ್ಜಾಲದಲ್ಲಿ ಪ್ರಕಟಿಸಲು**).

ಪ್ರತಿಯನ್ನು:–

1. ಮಾನ್ಯ ಉಪ ಮುಖ್ಯಮಂತ್ರಿಯವರು ಮತ್ತು ಉನ್ನತ ಶಿಕ್ಷಣ ಮತ್ತು ಐಟಿ ಮತ್ತು ಬಿಟಿ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ – ಮಾನ್ಯ ಸಚಿವರ ಆಧ್ಯ ಗಮನಕ್ಕೆ ತರುವ ಸಲುವಾಗಿ.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ(ಉನ್ನತ ಶಿಕ್ಷಣ), ಬಹುಮಹಡಿ ಕಟ್ಟಡ ಬೆಂಗಳೂರು ಇವರ ಆಪ್ತ ಕಾರ್ಯದರ್ಶಿಯವರಿಗೆ – ಮಾನ್ಯ ಅಪರ ಮುಖ್ಯ ಕಾರ್ಯದರ್ಶಿಯವರ ಆಧ್ಯ ಗಮನಕ್ಕೆ ತರುವ ಸಲುವಾಗಿ.
3. ಕಛೇರಿ ಪ್ರತಿ.